| ಕರ್ನಾಟಕ ವಿಧಾನ ಪರಿಷತ್ತು | | |
|---|---|---|
| 1 | **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | **2 (21)** |
| 2 | **ಮಾನ್ಯ ಸದಸ್ಯರ ಹೆಸರು** | **ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| 3 | **ಉತ್ತರಿಸ ಬೇಕಾದ ದಿನಾಂಕ** | **11-08-2025** |
| 4 | **ಉತ್ತರಿಸಬೇಕಾದ ಸಚಿವರು** | **ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು** |

| **ಕ್ರ ಸಂ** | **ಪ್ರಶ್ನೆ** | **ಉತ್ತರ** |
|---|---|---|
| ಅ) | ರಾಜ್ಯದಲ್ಲಿರುವ ಸರಕಾರಿ ವೈದ್ಯಕೀಯ ವಿಜ್ಞಾನ ಕಾಲೇಜುಗಳ ಸಂಖ್ಯೆ ಎಷ್ಟು; (ಮಾಹಿತಿ ಒದಗಿಸವುದು) | ರಾಜ್ಯದಲ್ಲಿ ಒಟ್ಟು 22 ಸರ್ಕಾರಿ ವೈದ್ಯಕೀಯ ವಿಜ್ಞಾನ ಕಾಲೇಜುಗಳಿವೆ. (ಜಿಲ್ಲಾವಾರು ಮಾಹಿತಿ ಅನುಬಂಧ-1ರಲ್ಲಿ ಲಗತ್ತಿಸಿದೆ.) |
| ಆ) | ಈ ಕಾಲೇಜುಗಳಿಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ; ಎಷ್ಟು ಹುದ್ದೆಗಳು ಖಾಲಿ ಇವೆ; | ಸದರಿ ಕಾಲೇಜುಗಳಿಗೆ ಒಟ್ಟು 21860 ಹುದ್ದೆಗಳು ಮಂಜೂರಾಗಿವೆ. ಇದರಲ್ಲಿ 9413 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ಹಾಗೂ ಒಟ್ಟು 12447 ಹುದ್ದೆಗಳು ಖಾಲಿ ಇವೆ.<br>ಸದರಿ ಸರ್ಕಾರಿ ಕಾಲೇಜುಗಳಿಗೆ ಹೊಂದಿಕೊಂಡ ಆಸ್ಪತ್ರೆಗಳಿಗೆ ಒಟ್ಟು 5584 ಹುದ್ದೆಗಳು ಮಂಜೂರಾಗಿವೆ. ಇದರಲ್ಲಿ 2028 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ಹಾಗೂ ಒಟ್ಟು 3556 ಹುದ್ದೆಗಳು ಖಾಲಿ ಇವೆ.<br>(ಕಾಲೇಜುವಾರು ವಿವರ ಅನುಬಂಧ-1ರಲ್ಲಿ ಲಗತ್ತಿಸಿದೆ.) |
| ಇ) | ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು; | ವೈದ್ಯಕೀಯ ಕಾಲೇಜುಗಳಲ್ಲಿ ಮಂಜೂರಾದ ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಭರ್ತಿಮಾಡಲು ದಿನಾಂಕ: 28.10.2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿರುವುದರಿಂದ ಯಾವುದೇ ಹುದ್ದೆಗಳನ್ನು ಭರ್ತಿಮಾಡಲು ಸಾಧ್ಯವಾಗಿರುವುದಿಲ್ಲ.<br>ಪ್ರಸ್ತುತ ಖಾಲಿ ಇರುವ ಹುದ್ದೆಗಳನ್ನು ಅಗತ್ಯತೆಗೆ ತಕ್ಕಂತೆ ಗುತ್ತಿಗೆ ಆಧಾರದ ಮೇಲೆ ಹಾಗೂ ಗ್ರೂಪ್ 'ಡಿ' ನೌಕರರನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ.<br>ಮುಂದುವರೆದು, ಸರ್ಕಾರಿ ಕಾಲೇಜುಗಳಿಗೆ ಹೊಂದಿಕೊಂಡ ಜಿಲ್ಲಾಸ್ಪತ್ರೆಯ ಹುದ್ದೆಗಳು ಆ.ಕು.ಕ. ಇಲಾಖೆಯ ಹುದ್ದೆಗಳಾಗಿದ್ದು, ಸದರಿ ಹುದ್ದೆಗಳನ್ನು ನಿಯೋಜನೆ ಮೂಲಕ ತುಂಬಲು ಕೋರಲಾಗಿರುತ್ತದೆ. |
| ಈ) | ಈ ಕಾಲೇಜುಗಳಲ್ಲಿ ತಾತ್ಕಾಲಿಕವಾಗಿ ಎಷ್ಟು ಹುದ್ದೆಗಳಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಮತ್ತು ನೌಕರರು ಎರವಲು ಸೇವೆ ಮೇಲೆ ಕಾರ್ಯ ನಿರ್ವಹಿಸುತ್ತಿದ್ದಾರೆ; ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ; | ಸದರಿ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ತಾತ್ಕಾಲಿಕವಾಗಿ ಒಟ್ಟು 806 ಹುದ್ದೆಗಳಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಮತ್ತು ನೌಕರರು ಎರವಲು ಸೇವೆ ಮೇಲೆ ಸುಮಾರು 1 ರಿಂದ 34 ವರ್ಷಗಳವರೆಗೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ.<br>ಸದರಿ ಸರ್ಕಾರಿ ಕಾಲೇಜುಗಳಿಗೆ ಹೊಂದಿಕೊಂಡ ಆಸ್ಪತ್ರೆಗಳಲ್ಲಿ ತಾತ್ಕಾಲಿಕವಾಗಿ ಒಟ್ಟು 750 ಹುದ್ದೆಗಳಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಮತ್ತು ನೌಕರರು ಎರವಲು ಸೇವೆ ಮೇಲೆ ಸುಮಾರು 1 ರಿಂದ 18 ವರ್ಷಗಳವರೆಗೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ<br>(ಕಾಲೇಜುವಾರು ವಿವರ ಅನುಬಂಧ-1ರಲ್ಲಿ ಲಗತ್ತಿಸಿದೆ). |
| ಉ) | ಹೀಗೆ ಎರವಲು ಸೇವೆ ಮೇಲೆ ಕಾರ್ಯನಿರ್ವಹಿಸುತ್ತಿರುವವನ್ನು ಸರ್ಕಾರ ಹಿಂಪಡೆಯಲು ಉದ್ದೇಶಿಸಿದೆಯೇ; ಉದ್ದೇಶಿಸಿದ್ದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯ ಕೆಲಸ ಕಾರ್ಯಗಳ ಮೇಲೆ ಪರಿಣಾಮ ಬೀರುವುದಿಲ್ಲವೇ ? | ವೈದ್ಯಕೀಯ ಕಾಲೇಜುಗಳಲ್ಲಿ ಸುಮಾರು 5 ವರ್ಷಕ್ಕೂ ಹೆಚ್ಚಿನ ಅವಧಿಗೆ ನಿಯೋಜನೆ ಸೇವೆ ಮೇಲೆ ಕಾರ್ಯನಿರ್ವಹಿಸುತ್ತಿರುವವರನ್ನು ಆ.ಕು.ಕ. ಇಲಾಖೆಯು ವರ್ಗಾವಣೆ ಮೂಲಕ ಹಿಂಪಡೆದಿರುತ್ತದೆ.<br>ಇದರಿಂದ ವೈದ್ಯಕೀಯ ಶಿಕ್ಷಣ ಇಲಾಖೆಯ ಸರ್ಕಾರಿ ಕಾಲೇಜುಗಳಲ್ಲಿ ಹಾಗೂ ಅದಕ್ಕೆ ಹೊಂದಿಕೊಂಡ ಆಸ್ಪತ್ರೆಗಳಲ್ಲಿನ ಕೆಲಸ ಕಾರ್ಯಗಳ ಮೇಲೆ ಪರಿಣಾಮ ಬೀರಲಿದ್ದು, ಪ್ರಸ್ತುತ ಸದರಿ ಖಾಲಿ ಹುದ್ದೆಗಳನ್ನು ಗುತ್ತಿಗೆ/ ಹೊರಗುತ್ತಿಗೆ ಆಧಾರದಲ್ಲಿ ತುಂಬಲಾಗುತ್ತಿದೆ ಹಾಗೂ ಆಕುಕ ಇಲಾಖೆಯ ಖಾಲಿ ಹುದ್ದೆಗಳಿಗೆ ನಿಯೋಜನ/ವರ್ಗಾವಣೆ ಮಾಡಲು ಆಕುಕ ಇಲಾಖೆಯನ್ನು ಕೋರಲಾಗಿರುತ್ತದೆ. |

ಕಡತ ಸಂಖ್ಯೆ: ಎಂಇಡಿ 152 ಆರ್‌ಜಿಯು 2025

**(ಡಾ:ಶರಣ ಪ್ರಕಾಶ ಆರ್. ಪಾಟೀಲ್)**
ವೈದ್ಯಕೀಯ ಶಿಕ್ಷಣ ಮತ್ತು
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಹಾಗೂ ಜೀವನೋಪಾಯ ಸಚಿವರು

## ಅನುಬಂಧ-1

### ಶ್ರೀ ಸಿ.ಎನ್.ಮಂಜೇಗೌಡ ಇವರ ಚುಕ್ಕೆ ಗುರತಿನ ಪ್ರಶ್ನೆ ಸಂಖ್ಯೆ:2(21)ಕ್ಕೆ ಸಂಬಂಧಿಸಿದಂತೆ

| ಕ್ರ.ಸಂ | ಸರ್ಕಾರಿ ವೈದ್ಯಕೀಯ ಕಾಲೇಜುಗಳು | ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ ಸರ್ಕಾರಿ ಆದೇಶದಂತೆ ಮಂಜೂರಾದ ಹುದ್ದೆಗಳ ವಿವರ | | | ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ ಹೊಂದಿಕೊಂಡಿರುವ ಜಿಲ್ಲಾ ಆಸ್ಪತ್ರೆಗಳಿಗೆ ಸರ್ಕಾರಿ ಆದೇಶದಂತೆ (ಆ.ಕು.ಕ ಇಲಾಖೆಯಿಂದ) ಮಂಜೂರಾದ ಹುದ್ದೆಗಳ ವಿವರ | | | ಸರ್ಕಾರಿ ಕಾಲೇಜುಗಳಲ್ಲಿ ತಾತ್ಕಾಲಿಕವಾಗಿ ಎಷ್ಟು ಹುದ್ದೆಗಳು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಮತ್ತು ನೌಕರರು ಎರವಲು ಸೇವೆ ಮೇಲೆ ಕಾರ್ಯ ನಿರ್ವಹಿಸುತ್ತಿದ್ದಾರೆ; ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ; | | ಸರ್ಕಾರಿ ಕಾಲೇಜುಗಳಿಗೆ ಹೊಂದಿಕೊಂಡಿರುವ ಜಿಲ್ಲಾ ಆಸ್ಪತ್ರೆಗಳಲ್ಲಿ ತಾತ್ಕಾಲಿಕವಾಗಿ ಎಷ್ಟು ಹುದ್ದೆಗಳು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಮತ್ತು ನೌಕರರು ಎರವಲು ಸೇವೆ ಮೇಲೆ ಕಾರ್ಯ ನಿರ್ವಹಿಸುತ್ತಿದ್ದಾರೆ; ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತಿದಾರೆ; | |
|---|---|---|---|---|---|---|---|---|---|---|---|
| | | ಮಂಜೂರಾದ ಹುದ್ದೆ | ಖಾಲಿ ಹುದ್ದೆ | ಭರ್ತಿ ಹುದ್ದೆ | ಮಂಜೂರಾದ ಹುದ್ದೆ | ಖಾಲಿ ಹುದ್ದೆ | ಭರ್ತಿ ಹುದ್ದೆ | ಒಟ್ಟು ಸಿಬ್ಬಂದಿಗಳ ಸಂಖೆ | ವರ್ಷಗಳು | ಒಟ್ಟು ಸಿಬ್ಬಂದಿಗಳ ಸಂಖೆ | ವರ್ಷಗಳು |
| 1 | ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು | 3704 | 2751 | 953 | 0 | 0 | 0 | 167 | 1 ವರ್ಷ ದಿಂದ 20 ವರ್ಷದ ವರಗೆ | 0 | 0 |
| 2 | ಮೈಸೂರು, ವೈದ್ಯಕೀಯ ಮಹಾವಿದ್ಯಾಲಯ ಮತು ಸಂಶೋದನಾ ಸಂಸೆ, ಮೈಸೂರು | 2546 | 1859 | 687 | 0 | 0 | 0 | 144 | 2 TO 23 | 0 | 0 |
| 3 | ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಹುಬ್ಬಳ್ಳಿ | 2621 | 1616 | 1005 | 0 | 0 | 0 | 54 | 1 ವರ್ಷ ದಿಂದ 34 ವರ್ಷದ ವರಗೆ | 0 | 0 |
| 4 | ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋದನಾ ಸಂಸೆ, ಬಳ್ಳಾರಿ. | 2085 | 1696 | 389 | 0 | 0 | 0 | 20 | 20 | 0 | 0 |
| 5 | ಬೀದರ್ ವೈದ್ಯಕೀಯ ವೈದ್ಯಕೀಯ ವಿಜ್ಞಾನಗಳ ಸಂಸೆ, ಬೀದರ್ | 772 | 451 | 321 | 288 | 219 | 69 | 0 | 0 | 69 | 18 ವರ್ಷ ಮೇಲಟು |
| 6 | ರಾಯಚೂರು ವೈದ್ಯಕೀಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು | 862 | 115 | 747 | 283 | 137 | 146 | 0 | 0 | 0 | 0 |
| 7 | ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾವಿ. | 789 | 78 | 711 | 538 | 192 | 346 | 107 | 0 | 107 | 0 |
| 8 | ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ. | 1169 | 392 | 777 | 381 | 332 | 49 | 0 | 0 | 49 | 05 ವರ್ಷ ಮೇಲಟು |
| 9 | ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ | 834 | 323 | 511 | 302 | 270 | 32 | 0 | 0 | 32 | 15 ವರ್ಷ ಮೇಲಟ್ಟು, |
| 10 | ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ | 739 | 387 | 352 | 245 | 217 | 28 | 28 | 0 | 28 | 0 |
| 11 | ಚಾಮರಾಜನಗರ, ವೈದ್ಯಕೀಯ ವಿಜ್ಞಾನಗಳ ಸಂಸೆ, ಚಾಮರಾಜನಗರ | 665 | 112 | 553 | 181 | 59 | 122 | 40 | 10 | | 2 to 18 ವರ್ಷ ಮೇಲಟು |
| 12 | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಡಗು | 691 | 301 | 390 | 458 | 183 | 275 | 183 | 10 | | |
| 13 | ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಲಬುರಗಿ | 820 | 170 | 650 | 868 | 648 | 220 | 0 | 0 | 220 | 11 |

| ಕ್ರ.ಸಂ | ಸರ್ಕಾರಿ ವೈದ್ಯಕೀಯ ಕಾಲೇಜುಗಳು | ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ ಸರ್ಕಾರಿ ಆದೇಶದಂತೆ ಮಂಜೂರಾದ ಹುದ್ದೆಗಳ ವಿವರ | | | ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ ಹೊಂದಿಕೊಂಡಿರುವ ಜಿಲ್ಲಾ ಆಸ್ಪತ್ರೆಗಳಿಗೆ ಸರ್ಕಾರಿ ಆದೇಶದಂತೆ (ಆ.ಕು.ಕ ಇಲಾಖೆಯಿಂದ) ಮಂಜೂರಾದ ಹುದ್ದೆಗಳ ವಿವರ | | | ಸರ್ಕಾರಿ ಕಾಲೇಜುಗಳಲ್ಲಿ ತಾತ್ಕಾಲಿಕವಾಗಿ ಎಷ್ಟು ಹುದ್ದೆಗಳು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಮತ್ತು ನೌಕರರು ಎರವಲು ಸೇವೆ ಮೇಲೆ ಕಾರ್ಯ ನಿರ್ವಹಿಸುತ್ತಿದ್ದಾರೆ; ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ; | | ಸರ್ಕಾರಿ ಕಾಲೇಜುಗಳಿಗೆ ಹೊಂದಿಕೊಂಡಿರುವ ಜಿಲ್ಲಾ ಆಸ್ಪತ್ರೆಗಳಲ್ಲಿ ತಾತ್ಕಾಲಿಕವಾಗಿ ಎಷ್ಟು ಹುದ್ದೆಗಳು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಮತ್ತು ನೌಕರರು ಎರವಲು ಸೇವೆ ಮೇಲೆ ಕಾರ್ಯ ನಿರ್ವಹಿಸುತ್ತಿದ್ದಾರೆ; ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತಿದ್ದಾರೆ; | |
|---|---|---|---|---|---|---|---|---|---|---|---|
| | | ಮಂಜೂರಾದ ಹುದ್ದೆ | ಖಾಲಿ ಹುದ್ದೆ | ಭರ್ತಿ ಹುದ್ದೆ | ಮಂಜೂರಾದ ಹುದ್ದೆ | ಖಾಲಿ ಹುದ್ದೆ | ಭರ್ತಿ ಹುದ್ದೆ | ಒಟ್ಟು ಸಿಬ್ಬಂದಿಗಳ ಸಂಖ್ಯೆ | ವರ್ಷಗಳು | ಒಟ್ಟು ಸಿಬ್ಬಂದಿಗಳ ಸಂಖ್ಯೆ | ವರ್ಷಗಳು |
| 14 | ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಪ್ಪಳ | 666 | 126 | 540 | 81 | 34 | 47 | Nil | Nil | 47 | ಕನಿಷ್ಟ 1 ವರ್ಷದಿಂದ 8 ವರ್ಷ ವರೆಗೆ |
| 15 | ಕೆ.ಹೆಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಗದಗ | 662 | 583 | 79 | 113 | 46 | 67 | 0 | 0 | 67 | 1 to 8 |
| 16 | ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಾರವಾರ | 540 | 416 | 124 | 266 | 203 | 63 | 63 | 10 | 63 | 10 |
| 17 | ಶ್ರೀ ಅಟಲ್ ಬಿಹಾರಿ ವಾಜಪೇಯಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು | 543 | 423 | 120 | 581 | 513 | 68 | 0 | 0 | 68 | Below 5 years |
| 18 | ನಂದಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಚಿಕಬಳ್ಳಾಪುರ | 208 | 170 | 38 | 230 | 124 | 106 | 0 | 0 | 0 | 0 |
| 19 | ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾವೇರಿ | 126 | 43 | 83 | 341 | 169 | 172 | 0 | 0 | 0 | 0 |
| 20 | ಯಾದಗಿರಿ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಯಾದಗಿರಿ | 292 | 137 | 155 | 175 | 61 | 114 | 0 | 0 | 0 | 0 |
| 21 | ಚಿಕ್ಕಮಗಳೂರು, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಿಕ್ಕಮಗಳೂರು | 447 | 256 | 191 | 253 | 149 | 104 | 0 | 0 | 0 | 0 |
| 22 | ಚಿತ್ರದುರ್ಗ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಿತ್ರದುರ್ಗ | 79 | 42 | 37 | 0 | 0 | 0 | 0 | 0 | 0 | 0 |
| | ಒಟ್ಟು | **21860** | **12447** | **9413** | **5584** | **3556** | **2028** | **806** | | **750** | |

**Note:** ಸಂಸ್ಥೆಯ ನಿರ್ದೇಶಕರು ದೃಡೀಕರಿಸಿ ನೀಡಲಾದ ಮಾಹಿತಿಯಂತೆ ಕ್ರೂಢೀಕರಿಸಲಾಗಿದೆ.

ನಿರ್ದೇಶಕರು,
ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ,
ಬೆಂಗಳೂರು.